ಈ) ಹಾಲಿ ಇರುವ ನ್ಯಾಯಾಲಯ ಕಟ್ಟಡವನ್ನು ಸೂಕ್ತವಾಗಿ ಮಾರ್ಪಡಿಸಿದ ನಂತರ ಹಾಗು ಹಾವೇರಿ ಜಿಲ್ಲೆಗೆ ಜಿಲ್ಲಾ ನ್ಯಾಯಾಧೀಶರ ಹುದ್ದೆಯನ್ನು ಸೃಜಿಸಿದ ನಂತರ ಹಾವೇರಿಯಲ್ಲಿ ಜಿಲ್ಲಾ ನ್ಯಾಯಾಲಯವನ್ನು ಪ್ರಾರಂಭಿಸಲಾಗುವುದು.

ಕೋಲಾರ ಸೋಂಪುರ ರಾಷ್ಟ್ರೀಯ ಹೆದ್ದಾರಿ ದುರವಸ್ಥೆ.

573(734)

ಶ್ರೀ ಕೃಷ್ಣಪ್ಪ.ವಿ.(ದೊಡ್ಡಬಳ್ಳಾಪುರ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ನಬಾರ್ಡ್ ಯೋಜನೆಯಿಂದ ಮಂಜೂರಾದ ಕಾಮಗಾರಿಗಳನ್ನು ಮತ್ತು ಹಣ ನೀಡುವುದನ್ನು ತಡೆಹಿಡಿಯಲು ಕಾರಣವೇನು:

2. ತೂಬಗೆರೆ ಹೋಬಳಿಯಲ್ಲಿ ನಿರ್ಮಿಸಿರುವ ನಬಾರ್ಡ್ ರಸ್ತೆಯಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ: ಹಾಗಿದ್ದಲ್ಲಿ ಉನ್ನತ ಅಧಿಕಾರಿಯೊಬ್ಬರಿಂದ ತನಿಖೆಯನ್ನು ನಡೆಸಲು ಸರ್ಕಾರ ಕ್ರಮ ಕೈಗೊಳ್ಳುವುದೇ:

3. ಕೋಲಾರ ಸೋಂಪುರ ರಾಷ್ಟ್ರೀಯ ಹೆದ್ದಾರಿಯಲ್ಲಿ ಲಿಂಕ್ ರಸ್ತೆಯ ನಿರ್ಮಾಣಕ್ಕಾಗಿ ಟೆಂಡರ್ ಕರೆದು ಎಷ್ಟುವರ್ಷಗಳಾಯಿತು: ಈ ಕಾಮಗಾರಿಗೆ ಬಿಡುಗಡೆಯಾದ ಹಣವೆಷ್ಟು: ಎಷ್ಟು ದಿನಗಳಿಂದ ಕೆಲಸ ಸ್ಥಗಿತಗೊಂಡಿದೆ: ಇದನ್ನು ಕಾರ್ಯತಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು:

4. ಇತ್ತೀಚಿನ ಈ ರಸ್ತೆಯು ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ: ಇದನ್ನು ದುರಸ್ತಿ ಪಡಿಸಲು ತೆಗೆದುಕೊಂಡಿರುವ ಕ್ರಮಗಳೇನು: ವಿವರ ನೀಡುವುದು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು):

1. ನಬಾರ್ಡ್ ಯೋಜನೆಯಡಿ ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಮಂಜೂರಾದ ಕಾಮಗಾರಿಗಳು ಹಾಗೂ ಹಣ ನೀಡುವುದನ್ನು ತಡೆಹಿಡಿದಿರುವ ಪ್ರಕರಣಗಳು ಯಾವುದೂ ಇಲ್ಲ.

2. ಸರ್ಕಾರದ ಗಮನಕ್ಕೆ ಬಂದಿಲ್ಲ.

3. ದಾಬಸ್‌ಪೇಟೆಯಿಂದ ದೊಡ್ಡಬಳ್ಳಾಪುರ ಮಾರ್ಗವಾಗಿ ದೇವನಹಳ್ಳಿಯವರೆಗೆ

ಲಿಂಕ್ ರಸ್ತೆಯ ನಿರ್ಮಾಣಕ್ಕಾಗಿ ಟೆಂಡರನ್ನು 1996-97ರಲ್ಲಿ ಕರೆಯಲಾಗಿದ್ದು ಸುಮಾರು 4 ವರ್ಷಗಳಾಗಿದೆ. ಈ ಕಾಮಗಾರಿಗೆ ರೂ. 10.59 ಕೋಟಿ ಬಿಡುಗಡೆಯಾಗಿದೆ. ಸುಮಾರು 8 ತಿಂಗಳುಗಳಿಂದ ಕೆಲಸ ಸ್ಥಗಿತಗೊಂಡಿದೆ. ಕಾಮಗಾರಿಯನ್ನು ಯಥಾಸ್ಥಿತಿ ಮುಕ್ತಾಯಗೊಳಿಸಿ, ಉಳಿಕೆ ಕೆಲಸಕ್ಕೆ ಅಂದಾಜು ಪಟ್ಟಿಯನ್ನು ತಯಾರಿಸಿ ಕೇಂದ್ರ ಭೂ ಸಾರಿಗೆ ಸಚಿವಾಲಯಕ್ಕೆ ಆಡಳಿತಾತ್ಮಕ ಮಂಜೂರಾತಿಗಾಗಿ ಸಲ್ಲಿಸಲಾಗಿದೆ. ಕೇಂದ್ರ ಭೂ ಸಾರಿಗೆ ಸಚಿವಾಲಯದಿಂದ ಆಡಳಿತಾತ್ಮಕ ಮಂಜೂರಾತಿ ದೊರೆತ ನಂತರ ಕಾಮಗಾರಿಯನ್ನು ಕೈಗೊಳ್ಳಲಾಗುವುದು.

4. ಬಂದಿದೆ. ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ರಸ್ತೆ ದುರಸ್ತಿ ಕೆಲಸವನ್ನು ಕೈಗೊಳ್ಳಲಾಗಿದೆ. ಉಳಿಕೆ ಕೆಲಸಕ್ಕೆ ಕೇಂದ್ರ ಭೂ ಸಾರಿಗೆ ಸಚಿವಾಲಯದಿಂದ ಮಂಜೂರಾತಿ ದೊರೆತ ಕೂಡಲೇ ಕಾಮಗಾರಿಯನ್ನು ಕೈಗೊಳ್ಳಲಾಗುವುದು.

ದೊಡ್ಡಬಳ್ಳಾಪುರ ತಾಲ್ಲೂಕಿನ ಪ್ರವಾಸೋದ್ಯಮ ಇಲಾಖಾವತಿಯಿಂದ ರಸ್ತೆಗಳ ದುರಸ್ತಿ.

574(735)

ಶ್ರೀ ಕೃಷ್ಣಪ್ಪ .ಎ.(ದೊಡ್ಡಬಳ್ಳಾಪುರ): ಮಾನ್ಯ ಪ್ರವಾಸೋದ್ಯಮ ಮತ್ತು ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೊಡ್ಡಬಳ್ಳಾಪುರ ತಾಲ್ಲೂಕಿನ ಪ್ರಸಿದ್ಧ ಕ್ಷೇತ್ರವಾದ ಎಸ್.ಎಸ್.ಘಾಟಿ ಮತ್ತು ಗಡಿಯಲ್ಲಿರುವ ನಂದಿದುರ್ಗಕ್ಕೆ ದೊಡ್ಡಬಳ್ಳಾಪುರದಿಂದ ಸಂಪರ್ಕ ಕಲ್ಪಿಸುವ ರಸ್ತೆಗಳು ಪೂರ್ಣ ಹದಗೆಟ್ಟಿದ್ದು ಪ್ರವಾಸೋದ್ಯಮ ಇಲಾಖಾ ವತಿಯಿಂದ ರಸ್ತೆಗಳನ್ನು ಅಗಲಗೊಳಿಸಿ ಸುಸ್ಥಿತಿಯಲ್ಲಿಡಲು ಕ್ರಮ ಕೈಗೊಳ್ಳಲಾಗಿದೆಯೇ; ಹಾಗಾದಲ್ಲಿ, ಯಾವಾಗ ಈ ಕೆಲಸವನ್ನು ಪ್ರಾರಂಭಿಸಲಾಗುವುದು?

ಶ್ರೀ ಆರ್.ರೋಷನ್ ಬೇಗ್ (ಪ್ರವಾಸೋದ್ಯಮ ಮತ್ತು ಹಜ್ ಸಚಿವರು):

ಅ) ರಸ್ತೆಗಳನ್ನು ಅಗಲಗೊಳಿಸಿ ಸುಸ್ಥಿತಿಯಲ್ಲಿಡುವುದು ಪ್ರವಾಸೋದ್ಯಮ ಇಲಾಖೆಯ ವ್ಯಾಪ್ತಿಗೆ ಬರುವುದಿಲ್ಲ.

ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಅರಣ್ಯ ಇಲಾಖೆಯ ಜಮೀನನ್ನು ಒತ್ತುವರಿ